# All India Radio: Bangalore
# Regional Bulletin In Kannada
# 20.12.2025 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ವಿಜಯನಗರದಲ್ಲಿ ಕೃತಕಬುದ್ಧಿಮತ್ತೆ ಪ್ರಯೋಗಾಲಯ ವೀಕ್ಷಿಸಿ, ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್
2. ರಾಜ್ಯಾದ್ಯಂತ ನಾಳೆಯಿಂದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ : ಜಿಲ್ಲಾಡಳಿತದಿಂದ ಸಕಲ ಸಿದ್ಧತೆ
3. ಮುಂಗಾರು ಹಂಗಾಮಿನ ಹತ್ತಿ ಬೆಳೆಗೆ ಕೇಂದ್ರ ಸರ್ಕಾರದಿಂದ ಬೆಂಬಲ ಬೆಲೆ ಘೋಷಣೆ
4. ಶೀತಗಾಳಿಯಿಂದ ರಕ್ಷಣೆ ಪಡೆಯಲು ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಮಾರ್ಗಸೂಚಿ ಬಿಡುಗಡೆ

<><><><>

ಕೇಂದ್ರ ಹಣಕಾಸು ಸಚಿವೆ ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾಗಿರುವ ನಿರ್ಮಲ ಸೀತಾರಾಮನ್ ಎರಡು ದಿನಗಳ ಕಾಲ ವಿಜಯನಗರ ಜಿಲ್ಲಾ ಪ್ರವಾಸ ಕೈಗೊಂಡಿದ್ದು, ಇಂದು ಹೊಸಪೇಟೆಯ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜಿನಲ್ಲಿ ವಿಜಯ ಪಥ ಪ್ರಾಜೆಕ್ಟ್‌ನ ಉದ್ಘಾಟನೆ ನೆರವೇರಿಸಿದರು. ಸೈಂಟ್ ಫೌಂಡೇಶನ್‌ನ ಸಹಯೋಗದಲ್ಲಿ ನಿರ್ಮಿಸಲಾದ ಕೃತಕಬುದ್ಧಿಮತ್ತೆ ಪ್ರಯೋಗಾಲಯಗಳ ವೀಕ್ಷಣೆ ಮಾಡಿ, ಪ್ರಾಜೆಕ್ಟ್ ವರ್ಕ್ ಮಾಡಿದ ವಿದ್ಯಾರ್ಥಿನಿಯರೊಂದಿಗೆ ಸಂವಾದ ನಡೆಸಿದರು. ಪ್ರೌಢಶಾಲೆಯ ಮಕ್ಕಳಿಗೆ ಎಐ ಕುರಿತು ಐದು ದಿನಗಳ ಕಾಲ ತರಬೇತಿ ನಡೆಸಲಾಗಿತ್ತು. ವಿದ್ಯಾರ್ಥಿನಿಯರು ತಾವು ಮಾಡಿದ ಪ್ರಾಜೆಕ್ಟ್ ಬಗ್ಗೆ ಸಚಿವರಿಗೆ ವಿವರಿಸಿ ತಿಳಿಸಿದರು. ಈ ಸಂದರ್ಭದಲ್ಲಿ ವಿಜಯನಗರ ಕ್ಷೇತ್ರದ ಶಾಸಕರಾದ ಹೆಚ್‌ಆರ್ ಗವಿಯಪ್ಪ, ಕವಿತಾ ಮನ್ನಿಕೇರಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು. ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ವಿಜ್ಞಾನ ಶಿಕ್ಷಕಿಯಾದ ರುಕ್ಸಾನಾ ಆಕಾಶವಾಣಿಗೆ ವಿಜಯಪಥ ಪ್ರಾಜೆಕ್ಟ್‌ನ ಕುರಿತು ವಿಶೇಷ ಮಾಹಿತಿ ನೀಡಿದರು.

<><><><>

ಮುಂಗಾರು-೨೦೨೫ ಹಂಗಾಮಿನಲ್ಲಿ ಪ್ರಮುಖ ವಾಣಿಜ್ಯ ಬೆಳೆಯಾದ ಹತ್ತಿಯನ್ನು ಗದಗ ಜಿಲ್ಲೆಯಲ್ಲಿ ಅಂದಾಜು ೭ ಸಾವಿರ ಹೆಕ್ಟರ್ ಪ್ರದೇಶದಲ್ಲಿ ಬೆಳೆಯಲಾಗಿದೆ. ಕೇಂದ್ರ ಸರ್ಕಾರವು ಬೆಂಬಲ ಬೆಲೆ ಯೋಜನೆಯಡಿ ಮಧ್ಯಮ ಎಳೆ ಹತ್ತಿ ಪ್ರತಿ ಕ್ವಿಂಟಲ್‌ಗೆ ೭ ಸಾವಿರದ ೭೧೦ ಮತ್ತು ಉದ್ದನೆಯ ಎಳೆ ಹತ್ತಿಗೆ ೮ ಸಾವಿರದ ೧೧೦ ದರವನ್ನು ಘೋಷಿಸಿದೆ. ಬೆಂಬಲ ಬೆಲೆ ಯೋಜನೆಯಡಿ ನೋಂದಾಯಿಸಿಕೊಳ್ಳಲು ಇದೇ ೩೧ ಕೊನೆಯ ದಿನವಾಗಿದ್ದು, ಜಿಲ್ಲೆಯ ರೈತರು ಈ ಯೋಜನೆಯ ಸದುಪಯೋಗಪಡೆದುಕೊಳ್ಳಲು ಭಾರತೀಯ ಹತ್ತಿ ನಿಗಮದ KAPAS Kisan App ನಲ್ಲಿ ಇದೇ ೩೧ ರೊಳಗಾಗಿ ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಛೇರಿ ಅಥವಾ ಭಾರತೀಯ ಹತ್ತಿ ನಿಗಮದ ಗದಗ ಕಛೇರಿಯನ್ನು ಸಂಪರ್ಕಿಸಬಹುದು.

<><><><>

ರಾಜ್ಯಾದ್ಯಂತ ನಾಳೆಯಿಂದ ೨೪ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ನಡೆಯಲಿದ್ದು, ವಿವಿಧ ಜಿಲ್ಲೆಗಳ ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆ ಪಲ್ಸ್ ಪೋಲಿಯೋ ಕೇಂದ್ರಗಳನ್ನು ೫ ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿಸಲು ವ್ಯವಸ್ಥೆ ಮಾಡಿಕೊಂಡಿವೆ. ಗ್ರಾಮೀಣ

ಹಾಗೂ ನಗರ ಪ್ರದೇಶಗಳಲ್ಲಿ ೮೨೮ ಕೇಂದ್ರಗಳನ್ನು ತೆರೆಯಲಾಗಿದ್ದು, ಸುಮಾರು ೧ ಲಕ್ಷದ ೪ ಸಾವಿರದ ೫೮೧ ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ನೋಡಿಕೊಳ್ಳಬೇಕು ಎಂದು ಅಪರ ಉತ್ತರಕನ್ನಡ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ ಹೇಳಿದ್ದಾರೆ. ದಾವಣಗೆರೆ ಜಿಲ್ಲಾದ್ಯಂತ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಕೈಗೊಳ್ಳಲಾಗಿದ್ದು, ಕಾರ್ಯಕ್ರಮದಡಿ ೫ ವ?ದೊಳಗಿನ ೧ ಲಕ್ಷದ ೪೧ ಸಾವಿರದ ೧೩೪ ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಷಣ್ಮುಖಪ್ಪ ತಿಳಿಸಿದ್ದಾರೆ. ಪೋಲಿಯೋ ರೋಗ ನಿರ್ಮೂಲನೆಗೊಳಿಸಲು ೧೯೯೫ ರಿಂದ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ವಿಜಯಪುರ ಜಿಲ್ಲೆಯಲ್ಲಿ ಎಲ್ಲ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಜಿಲ್ಲಾ ಅಧಿಕಾರಿ ಡಾ.ಆನಂದ್ ಕೆ. ಸೂಚಿಸಿದ್ದಾರೆ.

<><><><>

ವಿಜಯಪುರ ಜಿಲ್ಲೆಯಲ್ಲಿ ಬೀಸುತ್ತಿರುವ ಶೀತಗಾಳಿಯಿಂದಾಗುವ ಆರೋಗ್ಯ ಸಮಸ್ಯೆಗಳು ಹಾಗೂ ಅಪಘಾತಗಳನ್ನು ತಡೆಯುವ ಉದ್ದೇಶದಿಂದ ಸಾರ್ವಜನಿಕರು ಈ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಹಾಗೂ ವಿಜಯಪುರ ಜಿಲ್ಲಾಧಿಕಾರಿ ಡಾ.ಆನಂದ ಕೆ. ಸೂಚಿಸಿದ್ದಾರೆ. ಹಿರಿಯ ನಾಗರಿಕರು ಹಾಗೂ ೧೦ ವರ್ಷದ ಒಳಗಿನ ಚಿಕ್ಕಮಕ್ಕಳು ಅನಗತ್ಯವಾಗಿ ಹೊರ ಹೋಗದೆ ಸಾಧ್ಯವಾದಷ್ಟು ಮನೆಯೊಳಗೆ ಇರುವಂತೆ ಸಲಹೆ ನೀಡಲಾಗಿದೆ. ದೇಹಕ್ಕೆ ಅಗತ್ಯ ಶಾಖ ಪೂರೈಸಲು ಆರೋಗ್ಯಕರ ಹಾಗೂ ಬಿಸಿಯಾದ ಆಹಾರ ಪದಾರ್ಥಗಳನ್ನು ಸೇವಿಸಬೇಕು ಹಾಗೂ ನಿರ್ಜಲೀಕರಣ ತಪ್ಪಿಸಲು ಅಲ್ಕೋಹಾಲ್ ರಹಿತ ಪಾನೀಯಗಳನ್ನು ಹೆಚ್ಚಾಗಿ ಸೇವಿಸುವಂತೆ ತಿಳಿಸಲಾಗಿದೆ. ಶ್ವಾಸಕೋಶದ ರಕ್ಷಣೆಗೆ ಬಾಯಿಯನ್ನು ಮುಚ್ಚಿಕೊಳ್ಳುವುದು ಅಗತ್ಯ. ಅತಿಯಾದ ಕೆಲಸ ಹಾಗೂ ಪರಿಶ್ರಮವನ್ನು ತಪ್ಪಿಸಬೇಕು. ಅತಿಯಾದ ಶ್ರಮ ಹೃದಯಾಘಾತಕ್ಕೆ ಕಾರಣವಾಗುವ ಸಾಧ್ಯತೆ ಇರುವುದಾಗಿ ಎಚ್ಚರಿಕೆ ನೀಡಲಾಗಿದೆ.

<><><><>

ನಮ್ಮ ಸರ್ಕಾರ ಬಡವರ ಪರ ಸರ್ಕಾರವಾಗಿದ್ದು ಅವರ ಅಭಿವೃದ್ಧಿಗಾಗಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವ ಡಾ. ಶರಣಪ್ರಕಾಶ ಆರ್. ಪಾಟೀಲ್ ಹೇಳಿದರು. ಯಲಬುರ್ಗಾದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಮಾಡಿ ಮಾತನಾಡಿದ ಅವರು, ನಮ್ಮ ರಾಜ್ಯ ದೇಶದಲ್ಲಿ ಅತಿ ಹೆಚ್ಚು ನರ್ಸಿಂಗ್ ಕಾಲೇಜುಗಳನ್ನು ಹೊಂದಿದೆ. ೮೦೦ ಬಿಎಸ್ಸಿ ನರ್ಸಿಂಗ್, ೨೦೦ ಬಿಎಸ್ಸಿ ಡಿಪ್ಲೊಮಾ ನರ್ಸಿಂಗ್ ಕಾಲೇಜುಗಳಿದ್ದು, ಬೇರೆ ರಾಜ್ಯಗಳಿಂದ ಇಲ್ಲಿಗೆ ವಿದ್ಯಾರ್ಥಿಗಳು ಕಲಿಯಲು ಬರುತ್ತಾರೆ. ಇದು ನಮ್ಮ ನಾಯಕರ ದೂರ ದೃಷ್ಟಿಯಾಗಿದೆ ಎಂದು ತಿಳಿಸಿದರು.

<><><><>

'ವಿಕಸಿತ ಭಾರತ ಜಿ ರಾಮ್ ಜಿ' ಯೋಜನೆಯಾಗಿ ಬದಲಾಗಿರುವ ಹಿಂದಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಕಾಯ್ದೆಯಿಂದ ನನ್ನ ಬದುಕಿಗೆ ಹೊಸ ತಿರುವು ದೊರಕಿದೆ ಎಂದು ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಕೃಷಿಕ ಧನಂಜಯ ಅವರು ಹರ್ಷ ವ್ಯಕ್ತಪಡಿಸಿದ್ದಾರೆ. ಯೋಜನೆಯಿಂದ ತನಗಾದ ಲಾಭದ ಕುರಿತಂತೆ ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿರುವ ಅವರು, ಉದ್ಯೋಗ ಖಾತ್ರಿ ಯೋಜನೆಯಲ್ಲಿ ತೊಡಗಿಸಿಕೊಂಡಿದ್ದರಿಂದ ಹಲವಾರು ಕೆಲಸಗಳನ್ನು ಕ್ಲಪ್ತ ಸಮಯದಲ್ಲಿ ಪೂರ್ಣಗೊಳಿಸಲು

ಸಾಧ್ಯವಾಗಿದೆ. ತೋಟ ರಚನೆ, ಇಂಗು ಗುಂಡಿ, ಹಟ್ಟಿ ರಚನೆ, ನೀರಾವರಿ ವ್ಯವಸ್ಥೆ ಇತ್ಯಾದಿಗಳನ್ನು ಮಾಡಲು ಸಾಧ್ಯವಾಗಿದೆ. ಇದೀಗ ಕೇಂದ್ರ ಸರಕಾರ ವಿ.ಬಿ.ಜಿ-ರಾಮ್ ಜಿ ಮಸೂದೆಯಡಿ ಉದ್ಯೋಗ ಖಾತರಿ ದಿನಗಳನ್ನು ೧೦೦ರಿಂದ ೧೨೫ಕ್ಕೆ ಹೆಚ್ಚಿಸಿರುವುದು ಖುಷಿ ತಂದಿದೆ. ಇದು ಅತ್ಯಂತ ಶ್ಲಾಘನೀಯ ವಿಚಾರ ಎಂದು ಧನಂಜಯ ಅವರು ಪ್ರತಿಕ್ರಿಯಿಸಿದ್ದಾರೆ.

<><><>

ನ್ಯಾಷನಲ್ ಹೆರಾಲ್ಡ್ ಕುರಿತು ಸೋನಿಯಾ ಗಾಂಧಿ, ರಾಹುಲ್ ಗಾಂಧಿ ವಿರುದ್ಧ ಸುಳ್ಳು ಇಡಿ ಕೇಸ್ ಹಾಗೂ ನರೇಗಾ ಯೋಜನೆ ಹೆಸರು ಬದಲಾವಣೆಯಲ್ಲಿ ಮಹಾತ್ಮ ಗಾಂಧೀಜಿ ಅವರ ಹೆಸರು ಕೈಬಿಟ್ಟು ಅವಮಾನ ಮಾಡಿರುವುದನ್ನು ಖಂಡಿಸಿ ಕೆಪಿಸಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಇಂದು ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಕೆಪಿಸಿಸಿ ಅಧ್ಯಕ್ಷರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿದರು.

<><><>

ಕಾರವಾರದ ರವೀಂದ್ರನಾಥ ಠಾಗೋರ್ ಕಡಲ ತೀರದ ಮಯೂರ ವರ್ಮ ವೇದಿಕೆಯಲ್ಲಿ ಇದೇ ೨೨ ರಿಂದ ೨೮ ರ ವರೆಗೆ ನಡೆಯುವ ಕರಾವಳಿ ಉತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ತಿರ್ಮಾನಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್ ವೈದ್ಯ ತಿಳಿಸಿದ್ದಾರೆ. ಗೋಕರ್ಣದಲ್ಲಿ ಕರಾವಳಿ ಉತ್ಸವ-೨೦೨೫ರ ಲೋಗೋ, ಕಾರ್ಯಕ್ರಮದ ಪ್ರೋಮೋ ವಿಡಿಯೋ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಕರಾವಳಿ ಉತ್ಸವವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದು, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ವಿವಿಧ ಸಚಿವರು ಭಾಗವಹಿಸಲಿದ್ದಾರೆ. ಕಾರ್ಯಕ್ರಮ ಆಯೋಜನೆಗೆ ಸರ್ಕಾರದಿಂದ ೫ ಕೋಟಿ ರೂಪಾಯಿ ಬಿಡುಗಡೆಯಾಗಿದೆ ಎಂದು ಹೇಳಿದ್ದಾರೆ.

<><><>

ಧರ್ಮಸ್ಥಳ ಪ್ರಕರಣದ ಬಳಿಕ ಜೈಲಿನಲ್ಲಿದ್ದ ಚಿನ್ನಯ್ಯ ಎರಡು ದಿನಗಳ ಹಿಂದೆಯಷ್ಟೇ ಜಾಮೀನಿನ ಮೇಲೆ ಬಿಡುಗಡೆಗೊಂಡಿದ್ದು, ತನಗೆ ಜೀವ ಬೆದರಿಕೆ ಇರುವ ಸಾಧ್ಯತೆಯ ಕುರಿತು ಬೆಳ್ತಂಗಡಿ ಪೊಲೀಸ್ ಠಾಣೆಗೆ ರಕ್ಷಣೆಗಾಗಿ ದೂರು ನೀಡಿದ್ದಾರೆ.

<><><>

ಹಿರಿಯ ಪತ್ರಕರ್ತ ಹಾಗೂ ಕರ್ನಾಟಕ ಪತ್ರಕರ್ತರ ಸಹಕಾರ ಸಂಘದ ಉಪಾಧ್ಯಕ್ಷ ದೊಡ್ಡ ಬೊಮಯ್ಯ ಇಂದು ಹೃದಯಾಘಾತದಿಂದ ನಿಧನರಾಗಿದ್ದಾರೆ. ಮೂಲತಃ ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನ ರೊಪ್ಪ ಗ್ರಾಮದ ಇವರು ಕನ್ನಡದ ಹತ್ತು ಹಲವು ಪತ್ರಿಕೆಗಳಲ್ಲಿ ವರದಿಗಾರರಾಗಿ ಕಾರ್ಯ ನಿರ್ವಹಿಸುತ್ತಿದ್ದರು. ಆಕಾಶವಾಣಿ ಮತ್ತು ದೂರದರ್ಶನದ ಸುದ್ದಿ ವಿಭಾಗಗಳಲ್ಲಿ ಅರೆಕಾಲಿಕ ಸಹಾಯಕ ಸುದ್ದಿ ಸಂಪಾದಕರಾಗಿ ಕಾರ್ಯ ನಿರ್ವಹಿಸುತ್ತಿದ್ದ ಅವರಿಗೆ, ಪತ್ರಿಕೋದ್ಯಮದಲ್ಲಿ ೩೦ ವರ್ಷಕ್ಕೂ ಅಧಿಕ ಅನುಭವವಿತ್ತು. ದೊಡ್ಡ ಬೊಮ್ಮಯ್ಯ ಅವರು ಪ್ರೆಸ್‌ಕ್ಲಬ್ ಉಪಾಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು. ಪತ್ರಿಕೋದ್ಯಮಕ್ಕೆ ಅವರು ನೀಡಿರುವ ಕೊಡುಗೆಗಾಗಿ ಸ್ಥಳೀಯ ಸಂಘ-ಸಂಸ್ಥೆಗಳಿಂದ ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಅವರು ಭಾಜನರಾಗಿದ್ದರು. ನೇತ್ರದಾನ ಮೂಲಕ ಸಾವಿನಲ್ಲೂ ಮಾದರಿಯಾಗಿದ್ದಾರೆ. ಅವರ ಅಂತ್ಯಕ್ರಿಯೆ ಅವರ ಹುಟ್ಟೂರಾದ ಪಾವಗಡ ತಾಲ್ಲೂಕಿನ ರೊಪ್ಪ ಗ್ರಾಮದಲ್ಲಿ ನಡೆಯಲಿದೆ. ದೊಡ್ಡ ಬೊಮಯ್ಯ ಅವರ ನಿಧನವಾರ್ತೆ ನೋವುಂಟು ಮಾಡಿದೆ. ಸುದೀರ್ಘ ೩೦ ವರ್ಷಗಳ ತಮ್ಮ ವೃತ್ತಿ ಜೀವನದಲ್ಲಿ ಪತ್ರಿಕಾ ಧರ್ಮಕ್ಕೆ ನಿಷ್ಠರಾಗಿದ್ದವರು. ಮೃತರ ಆತ್ಮಕ್ಕೆ ಚಿರಶಾಂತಿ ದೊರಕಲಿ, ಅವರ ಕುಟುಂಬವರ್ಗಕ್ಕೆ ಈ ನೋವು ಭರಿಸುವ ಶಕ್ತಿ ಸಿಗಲೆಂದು ಪ್ರಾರ್ಥಿಸುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>